ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಪತ್ರಿಕಾ ಪ್ರಕಟಣೆ/2021 ದಿನಾಂಕ: 23-02-2022

## ಪತ್ರಿಕಾ ಪ್ರಕಟಣೆ

### ಕರ್ನಾಟಕದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿ ಸ್ಪರ್ಧಾತ್ಮಕ ಪರೀಕ್ಷೆಗೆ ಲಿಪಿಕಾರರ ಸೌಲಭ್ಯ

ಕರ್ನಾಟಕದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿ ಸಂಬಂಧ ಸ್ಪರ್ಧಾತ್ಮಕ ಪರೀಕ್ಷೆಗೆ ಲಿಪಿಕಾರರ ಸೌಲಭ್ಯವನ್ನು ಪಡೆಯಲು ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಅಂಧ / ದೃಷ್ಟಿ ಮಾಂದ್ಯ ಅಭ್ಯರ್ಥಿಗಳಿಗೆ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 74 ಸೇನೆನಿ 2006 ಬೆಂಗಳೂರು ದಿನಾಂಕ 30-10-2007 ರ ಅನ್ವಯ, ವೈದ್ಯರ ಸಮಿತಿಯಿಂದ ಅಂಗವಿಕಲತೆ ಅರ್ಹತೆಯನ್ನು ಪರೀಕ್ಷಿಸಲು ದಿನಾಂಕ **04-03-2022 ಮತ್ತು 05-03-2022** ರಂದು ವೈದ್ಯಕೀಯ ತಪಾಸಣೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇಲ್ಲಿ ನಡೆಸಲಾಗುವುದು.

ಅಂಧ / ದೃಷ್ಟಿ ಮಾಂದ್ಯ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಿರುವ ಅನುಬಂಧ-1 ಅನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ಪ್ರಾಧಿಕಾರದ ಇಮೇಲ್ recruitment2021kea@gmail.com ಗೆ ಈ ಕೆಳಕಂಡ ದಾಖಲೆಗಳನ್ನು ಕಡ್ಡಾಯವಾಗಿ ಕಳುಹಿಸಬೇಕು.

1. ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿ ಪ್ರತಿ
2. ಅಭ್ಯರ್ಥಿಯ ಗುರುತಿನ ಚೀಟಿ
3. ಭರ್ತಿ ಮಾಡಿದ ಅನುಬಂಧ-1 ರ ಪ್ರತಿ
4. ಲಿಪಿಕಾರರ ಗುರುತಿನ ಚೀಟಿ
5. ವೈದ್ಯಕೀಯ ಪ್ರಮಾಣ ಪತ್ರ

ಅಂಧ / ದೃಷ್ಟಿ ಮಾಂದ್ಯ ಅಭ್ಯರ್ಥಿಗಳು ಲಿಪಿಕಾರರ ಸೌಲಭ್ಯವನ್ನು ಪಡೆಯಲು ಈ ಮೇಲೆ ತಿಳಿಸಿರುವ ಎಲ್ಲಾ ಮೂಲ ದಾಖಲೆಗಳೊಂದಿಗೆ ವೈದ್ಯಕೀಯ ತಪಾಸಣೆಗೆ ಹಾಜರಾಗಲು ದಿನಾಂಕ **04-03-2022 ಅಥವಾ 05-03-2022** ರಂದು ಬೆಳಿಗ್ಗೆ 10.30ಕ್ಕೆ ಹಾಜರಾಗಲು ಈ ಮೂಲಕ ಸೂಚಿಸಿದೆ. ಅಭ್ಯರ್ಥಿಯ ಅಂಗವಿಕಲತೆಯ ಅರ್ಹತೆಯ ಬಗ್ಗೆ ವೈದ್ಯರ ಸಮಿತಿಯು ನೀಡುವ ತೀರ್ಮಾನವೇ ಅಂತಿಮವಾಗಿರುತ್ತದೆ. ವೈದ್ಯಕೀಯ ತಪಾಸಣೆಯಲ್ಲಿ ಅರ್ಹತೆ ಪಡೆಯುವ ಅಂಧ / ದೃಷ್ಟಿ ಮಾಂದ್ಯ ಅಭ್ಯರ್ಥಿಗಳಿಗೆ ಮಾತ್ರ ನಿಯಮಾನುಸಾರ ಲಿಪಿಕಾರರ ಸೌಲಭ್ಯವನ್ನು ಪಡೆಯಲು ಅನುಮತಿಸಲಾಗುವುದು. ವೈದ್ಯಕೀಯ ತಪಾಸಣೆಯ ನಂತರ ಅಂಧ / ದೃಷ್ಟಿ ಮಾಂದ್ಯ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು.

ಅಂಧ / ದೃಷ್ಟಿ ಮಾಂದ್ಯ ಅಭ್ಯರ್ಥಿಗಳಿಗೆ ಲಿಪಿಕಾರರ ಸೌಲಭ್ಯವನ್ನು ನೀಡಲು ಮಾತ್ರ ವೈದ್ಯಕೀಯ ತಪಾಸಣೆಯನ್ನು ನಡೆಸುವುದರಿಂದ, ಇತರೆ ಅಂಗವಿಕಲ ಅಭ್ಯರ್ಥಿಗಳು ಈ ಹಂತದಲ್ಲಿ ವೈದ್ಯಕೀಯ ತಪಾಸಣೆಗೆ ಹಾಜರಾಗಬೇಕಿರುವುದಿಲ್ಲ. ವೈದ್ಯಕೀಯ ತಪಾಸಣೆಯ ನಂತರ ಅನರ್ಹಗೊಳ್ಳುವ ಅಂಧ / ದೃಷ್ಟಿ ಮಾಂದ್ಯ ಅಭ್ಯರ್ಥಿಗಳು ನಿಗದಿತ ಅರ್ಜಿ ಶುಲ್ಕವನ್ನು ಪಾವತಿಸಬೇಕು.

ಹೆಚ್ಚಿನ ವಿವರಗಳಿಗಾಗಿ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಲು ಕೋರಿದೆ.

ಕಾರ್ಯನಿರ್ವಾಹಕ ನಿರ್ದೇಶಕರು.

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in